ಊ)ಹಾಗಿದ್ದಲ್ಲಿ ಈ ಕಾವೇರಿ ನದಿಯಲ್ಲಿರುವ ನೀರಿನ ಪ್ರಮಾಣವೆಷ್ಟು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಹೌದು.

ಆ) ನಮ್ಮ ರಾಜ್ಯದ ಜಲಾಶಯಗಳಲ್ಲಿರುವ ನೀರು ನಮ್ಮ ರಾಜ್ಯದ ಬೆಳಿಗಳಿಗೆ ಮತ್ತು ಇತರ ಅವಶ್ಯಕತೆಗಳಿಗೆ ಸಾಕಾಗಿರುವುದಿಲ್ಲವಾದ್ದರಿಂದ ತಮಿಳುನಾಡಿಗೆ ನೀರು ಬಿಡಲಾಗಿಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಇಲ್ಲ.

ಊ) ಉದ್ಭವಿಸುವುದಿಲ್ಲ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರಾರಂಭಿಸಲಾಗುವ ಬೇಡ್ತಿ ಯೋಜನೆಯನ್ನು ಕೈಬಿಡುವ ಬಗ್ಗೆ

1035 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಬೇಡ್ತಿ ಯೋಜನೆಯನ್ನು ಕಾರ್ಯಗತಗೊಳಿಸುವ ವಿಚಾರ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಆ) ಹಾಗಿದ್ದಲ್ಲಿ ಈ ಯೋಜನೆಯನ್ನು ಕಾರ್ಯಗತಗೊಳಿಸುವುದನ್ನು ಕೈಬಿಡಬೇಕೆಂದು ಅಲ್ಲಿನ ಜನತೆಯು ವ್ಯಾಪಕ ಪ್ರತಿಭಟನೆಯನ್ನು ನಡೆಸುತ್ತಿರುವುದರಿಂದ ಸರ್ಕಾರವು ಈ ಬೇಡ್ತಿ ಯೋಜನೆಯನ್ನು ಕೈ ಬಿಡುವ ಬಗ್ಗೆ ಕ್ರಮ ಕೈಗೊಳ್ಳುತ್ತಿದೆಯೇ?

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಕಾರವಾರ ಮತ್ತು ಉತ್ತರಕನ್ನಡ ಜಿಲ್ಲೆಯ ಸುತ್ತುಮುತ್ತಲಿನ ಪ್ರದೇಶದಲ್ಲಿಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಅಧ್ಯಾಯನ ನಡೆಸಲಾಗುತ್ತದೆ. ಆ ವರದಿ ಬಂದ ನಂತರ ತೀರ್ಮಾನ ಕೈಗೊಳ್ಳಲಾಗುವುದು.

ಮಲಪ್ರಭಾ, ಘಟಪ್ರಭಾ ಹಾಗೂ ಆಲಮಟ್ಟಿ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಹಣ ಬಿಡುಗಡೆಗೆ ಒತ್ತಾಯ

267 - ಶ್ರೀ ಮಲ್ಲಾರಿಗೌಡ ಎಸ್.ಪಾಟೀಲ್ (ಸಂಕೇಶ್ವರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಲಪ್ರಭಾ ಘಟಪ್ರಭಾ ಹಾಗೂ ಆಲಮಟ್ಟಿ ನೀರಾವರಿ ಯೋಜನೆಗಳಿಗೆ ಹೆಚ್ಚಿನ ಹಣ ಬಿಡುಗಡೆ ಮಾಡುವುದಕ್ಕೆ ಸರ್ಕಾರಕ್ಕೆ ಇರುವ ತೊಂದರೆಗಳೇನು?

ಆ) ಕಳೆದ 3 ವರ್ಷಗಳಲ್ಲಿ ಈ ಯೋಜನೆಗಳಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಇ) ಆಲಮಟ್ಟಿ ಜಲವಿದ್ಯುತ್ ಘಟಕಕ್ಕೆ ಕರ್ನಾಟಕ ವಿದ್ಯುತ್ ನಿಗಮದಿಂದ ಕೈಗೊಳ್ಳಬಹುದಾದ ಕಾರ್ಯಕ್ರಮವೇನು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಯೋಜನೆಗಳಿಗೆ ಆಯವ್ಯಯದಲ್ಲಿ ಕೊಡಲಾದ ಅನುಧಾನ, ಯೋಜನೆಗಳ ಪ್ರಗತಿ, ಯೋಜನಾ ಅಧಿಕಾರಿಗಳಿಂದ ಬರುವ ಕೋರಿಕೆ ಮತ್ತು ಸರ್ಕಾರದ ಆರ್ಥಿಕ